ಆ) ತಾತ್ಕಾಲಿಕ ನೆಲೆಯಲ್ಲಿ ನೇಮಕಗೊಂಡ ಶಿಕ್ಷಕರುಗಳ ಸಂಖ್ಯೆ ಎಷ್ಟು; ಅವರು ಎಷ್ಟು ಸಮಯದಿಂದ ಕೆಲಸದಲ್ಲಿದ್ದಾರೆ; ಸದರಿ ತಾತ್ಕಾಲಿಕ ಶಿಕ್ಷಕರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಆ ಕುರಿತಾದ ವಿವರಗಳೇನು?

ಇ) ಬೆಳ್ತಂಗಡಿ ತಾಲ್ಲೂಕಿನ ಮುಂಡಾಜಿ ನವೋದಯ ವಸತಿ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

ಈ) ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರದ ಸಕಾಲಿಕ ಕ್ರಮಗಳೇನು?

ಡಾ: ವೈ. ನಾಗಪ್ಪ (ಮಾನ್ಯ ಸಮಾಜ ಕಲ್ಯಾಣ ಸಚಿವರು) :

ಅ) 1) ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮಚ್ಚಿನ ಇಲ್ಲಿ ಮಂಜೂರಾಗಿರುವ ಶಿಕ್ಷಕರ ಹುದ್ದೆಗಳ ಸಂಖ್ಯೆ:11.

2) ಈ ಶಾಲೆಯಲ್ಲಿ ಪ್ರಸ್ತುತ 8 ಮಂದಿ ಶಿಕ್ಷಕರು ಕರಾರು ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ.

3) ಈ ಶಾಲೆಯಲ್ಲಿ ಕೆಳಕಂಡ 3 ಶಿಕ್ಷಕರ ಹುದ್ದೆಗಳು ಮತ್ರ ಖಾಲಿ ಇವೆ.

(ಅ) ಯೋಗ (ಆ) ಕ್ರಾಫ್ಟ (ಇ) ಗಣಕಯಂತ್ರ

ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಅಗತ್ಯಕ್ಕೆ ಅನುಗುಣವಾಗಿ ಜಿಲ್ಲಾ ಪಂಚಾಯಿತಿಗಳಿಗೆ ಸೂಚನೆ ನೀಡಲಾಗಿದೆ.

ಆ) 1) ಮಚ್ಚಿನ ಶಾಲೆಯಲ್ಲಿ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ಶಿಕ್ಷಕರ ಸಂಖ್ಯೆ:8

2) ಈ ತಾತ್ಕಾಲಿಕ ಶಿಕ್ಷಕರು 2002 ನೇ ಶೈಕ್ಷಣಿಕ ವರ್ಷದಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ. ಹಾಗೂ ಇವರುಗಳ ಕರಾರು ಒಪ್ಪಂದವನ್ನು ಪ್ರತಿ ಶೈಕ್ಷಣಿಕ ವರ್ಷಕ್ಕೆ ನವೀಕರಿಸಲಾಗಿದೆ.

3) ಈ ಶಿಕ್ಷಕರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸದ್ಯಕ್ಕೆ ಇರುವುದಿಲ್ಲ.

ಇ) ನವೋದಯ ಮಾದರಿ ವಸತಿ ಶಾಲೆ, ಮುಂಡಾಜೆ ಇಲ್ಲಿ 6 ಜನ ಶಿಕ್ಷಕರು ಕಾರ್ಯ ನಿರ್ವಹಿಸುತ್ತಿದ್ದಾರೆ. ಪ್ರಾಶುಂಪಾಲರ ಮತ್ತು ಆಂಗ್ಲ ಶಿಕ್ಷಕರ ಹುದ್ದೆಗಳ ಹುದ್ದೆಗಳು ಖಾಲಿ ಇವೆ.

ಈ) ದಿನಾಂಕ: 01.04.2005 ರಿಂದ ಈ ಶಾಲೆಗಳು ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ವರ್ಗಾವಣೆಯಾಗಿರುತ್ತದೆ. ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಅಗತ್ಯಕ್ಕೆ ಅನುಗುಣವಾಗಿ ತಾತ್ಕಾಲಿಕವಾಗಿ ಕರಾರು ಒಪ್ಪಂದದ ಮೇಲೆ ಪಸಕ್ತ ಶೈಕ್ಷಣಿಕ ವರ್ಷಕ್ಕೆ ಮಾತ್ರ ಜಿಲ್ಲಾ ಮಟ್ಟದಲ್ಲಿ ಭರ್ತಿ ಮಾಡಿಕೊಳ್ಳಲು ಜಿಲ್ಲಾ ಪಂಚಾಯಿತಿಗಳಿಗೆ ಸೂಚನೆ ನೀಡಲಾಗಿದೆ.

5128 (6102) ಶ್ರೀ ಪ್ರಭಾಕರ ಬಂಗೇರ. ಕೆ (ಬೆಳ್ತಂಗಡಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಕಾಲೋನಿಗಳು ಎಷ್ಟು; ಈ ಕಾಲೋನಿಗಳಿಗೆ ಮೂಲಭೂತ ವ್ಯವಸ್ಥೆಗಳಾದ ರಸ್ತೆಗಳ ಡಾಂಬರೀಕರಣ. ಸಮುದಾಯ ಭವನ ಇನ್ನಿತರ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆಯೇ;

ಆ) ಇಲ್ಲವಾದಲ್ಲಿ ಯಾವಾಗ ಒದಗಿಸಿಕೊಡಲಾಗುವುದು;

ಇ) ಬೆಳ್ತಂಗಡಿ ತಾಲ್ಲೂಕು ಪ್ರದೇಶದಲ್ಲಿ ಮೆಟ್ರಿಕ್ ಪೂರ್ವ ಮತ್ತು ನಂತರದ ಹಾಸ್ಟೆಲ್‌ಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಅದರ ವಿವರಗಳೇನು;

ಉ) ಬೆಳ್ತಂಗಡಿ ತಾಲ್ಲೂಕಿನ ಮಹಂತ್ಯಾರು ಎಂಬಲ್ಲಿ ಮೆಟ್ರಿಕ್ ನಂತರದ ಹೆಣ್ಣುಮಕ್ಕಳ ಹಾಸ್ಟೆಲ್‌ನ್ನು ಪ್ರಾರಂಭಿಸಿ ಮಹಿಳೆಯರ ಶಿಕ್ಷಣಕ್ಕೆ ಪ್ರೋತ್ಸಾಹಿಸುವ ಕ್ರಮವನ್ನು ಸರ್ಕಾರ ಕೈಗೊಳ್ಳುವುದೆ;

ಊ) ಬೆಳ್ತಂಗಡಿ ತಾಲ್ಲೂಕಿನ ಕೊಕ್ಕಡ ಸವಣಾಲು ಗೇರುಕಟ್ಟೆಗಳಲ್ಲಿ ಮೆಟ್ರಿಕ್ ಪೂರ್ವದ ಹೆಣ್ಣುಮಕ್ಕಳ ಹಾಸ್ಟೆಲ್‌ನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ;

ಋ) ಈಗ ಇರುವ ಹಾಸ್ಟೆಲ್‌ಗಳಲ್ಲಿನ ಪ್ರವೇಶ ಸಂಖ್ಯೆಯನ್ನು ಹೆಚ್ಚಿಸುವ ಸಂಬಂಧವಾಗಿ ಸರ್ಕಾರದ ಕ್ರಮಗಳೇನು;

ಡಾ: ವೈ. ನಾಗಪ್ಪ (ಮಾನ್ಯ ಸಮಾಜ ಕಲ್ಯಾಣ ಸಚಿವರು) :

ಅ) ಪರಿಶಿಷ್ಟ ಜಾತಿ

ಬೆಳ್ತಂಗಡಿ ತಾಲ್ಲೂಕಿನಲ್ಲಿ 104 ಪರಿಶಿಷ್ಟ ಜಾತಿ ಕಾಲೋನಿಗಳು ಇವೆ. ವಿಶೇಷ ಘಟಕ ಯೋಜನೆಯಡಿಯಲ್ಲಿ ಕಚ್ಚಾ ರಸ್ತೆಗಳ ಅಭಿವೃದ್ಧಿಗಾಗಿ ಈ ಕೆಳಗಿನಂತೆ 4 ವರ್ಷಗಳಲ್ಲಿ ಅನುದಾನ ನೀಡಲಾಗಿರುತ್ತದೆ.

(ರೂ.ಗಳಲ್ಲಿ)

	2001-02	2002-03	2003-04	2004-05
ಕಚ್ಚಾ ರಸ್ತೆ	2.50	2.50	2.50	1.78

ಡಾಂಬರೀಕರಣ:-

ಕ್ಲಸ್ಟರ್ ಅಭಿವೃದ್ಧಿ ಯೋಜನೆಯಂತೆ ನೆರಿಯಾ ಗ್ರಾಮಕ್ಕೆ ಮೂಲಭೂತ ಸೌಕರ್ಯ ಒದಗಿಸಿದೆ.

ಸಮುದಾಯ ಭವನ:-

ಪಡಂಗಡಿ ಮಿನಿ ಅಂಬೇಡ್ಕರ್ ಭವನ ಇರುತ್ತದೆ ಹಾಗೂ ಕ್ಲಸ್ಟರ್ ಅಭಿವೃದ್ಧಿ ಯೋಜನೆಯಲ್ಲಿ ಸಮುದಾಯ ಭವನ ಪ್ರಸ್ತಾವನೆಯಲ್ಲಿದೆ.

ಪರಿಶಿಷ್ಟ ವರ್ಗ:-

ಬೆಳ್ತಂಗಡಿ ತಾಲ್ಲೂಕಿನಲ್ಲಿ 62 ಪರಿಶಿಷ್ಟ ವರ್ಗದ ಕಾಲೋನಿಗಳಿವೆ. ಈ ಕಾಲೋನಿಗಳಿಗೆ ಮೂಲಭೂತ ಸೌಲಭ್ಯಗಳಾದ ರಸ್ತೆಗಳ ಡಾಂಬರೀಕರಣ, ಸಮುದಾಯ ಭವನ ಇನ್ನಿತರ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಕಳೆದ 4 ವರ್ಷಗಳಲ್ಲಿ ಬೆಳ್ತಂಗಡಿ ತಾಲ್ಲೂಕಿಗೆ ಮೂಲಭೂತ ಸೌಲಭ್ಯಗಳಿಗಾಗಿ ರೂ. 11.00 ಲಕ್ಷಗಳನ್ನು ಜಿಲ್ಲಾ ವಲಯದಲ್ಲಿ ವಿನಿಯೋಗಿಸಲಾಗಿದೆ. 2004-05ನೇ ಸಾಲಿನಲ್ಲಿ ಬೆಳ್ತಂಗಡಿ ತಾಲ್ಲೂಕಿನ ವೆರಿಯಾ ಕ್ಲಸ್ಟರ್ ಗ್ರಾಮಕ್ಕೆ ಮೂಲಭೂತ ಸೌಲಭ್ಯಗಳಾದ ರಸ್ತೆ ಡಾಂಬರೀಕರಣ, ನೀರಾವರಿ ಸೌಲಭ್ಯ ಸಮುದಾಯ ಭವನ ನಿರ್ಮಾಣ, ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಕಾಮಗಾರಿಗಳಿಗೆ ರೂ. 50.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಆ) ಹಣದ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಸೌಲಭ್ಯಗಳನ್ನು ಒದಗಿಸಿಕೊಡಲಾಗುವುದು.

ಇ) ಇಲ್ಲ.

ಈ) ಇಲ್ಲ.

ಉ) ಇಲ್ಲ.

ಊ) ಇಲ್ಲ.

ಋ) ಹಾಸ್ಟೆಲ್ ಗಳಲ್ಲಿನ ಪ್ರವೇಶ ಸಂಖ್ಯೆಯನ್ನು ಹೆಚ್ಚಿಸುವ ಸಂಬಂಧ ಪರಿಶೀಲಿಸಲಾಗುತ್ತಿದೆ.

5129 (6115) ಶ್ರೀ ರಘುಪತಿ ಭಟ್ ಕೆ. (ಉಡುಪಿ): ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉಡುಪಿ ಜಿಲ್ಲೆ ರಚನೆ ಆದ ಮೇಲೆ ಜಿಲ್ಲಾ ಮಟ್ಟದ ಪಶುವೈದ್ಯಾಲಯ ತೆರೆಯಲಾಗಿದೆಯೇ;

ಆ) ಯಾವ ಸವಲತ್ತುಗಳು ಈ ಆಸ್ಪತ್ರೆಯಲ್ಲಿ ಸಿಗುತ್ತಿವೆ, ಮುಂದೆ ಯಾವ ಸವಲತ್ತುಗಳನ್ನು ಒದಗಿಸಲಾಗುವುದು;

ಇ) ಈ ಆಸ್ಪತ್ರೆಯಲ್ಲಿ ಯಾವ ಕೊರತೆ ಇದೆ, ಜಿಲ್ಲೆಯಲ್ಲಿ ವೈದ್ಯಾಧಿಕಾರಿಗಳ ಕೊರತೆ ಎಷ್ಟು;

ಈ) ಹೊಸ ಪಶುವೈದ್ಯಕೀಯ ಚಿಕಿತ್ಸಾಲಯಗಳನ್ನು ನಗರ ಪ್ರದೇಶಗಳಲ್ಲಿ ತೆರೆಯಲು ತೊಂದರೆ ಏನು;

ಉ) ಉಡುಪಿ ವಿಧಾನ ಸಭಾ ಕ್ಷೇತ್ರದಲ್ಲಿ ಎಷ್ಟು ಹೊಸ ಚಿಕಿತ್ಸಾಲಯಗಳನ್ನು ತೆರೆಯಲಾಗುವುದು?

ಶ್ರೀ ಮಿರಾಜುದ್ದೀನ್ ಎನ್. ಪಟೇಲ್ (ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು) :

ಅ) ಉಡುಪಿ ಜಿಲ್ಲೆ ರಚನೆಯಾಗುವ ಮೊದಲು ಇದ್ದ ಉಡುಪಿ ತಾಲ್ಲೂಕು ಮಟ್ಟದ ಆಸ್ಪತ್ರೆಯೇ ಜಿಲ್ಲೆ ರಚನೆಯಾದ ನಂತರ, ಜಿಲ್ಲಾ ಮಟ್ಟದ ಆಸ್ಪತ್ರೆಯನ್ನಾಗಿ ಕಾರ್ಯನಿರ್ವಹಿಸುತ್ತಿದೆ.

ಆ) ಈ ಆಸ್ಪತ್ರೆಯಲ್ಲಿ ರೋಗಗ್ರಸ್ಥ ಜಾನುವಾರುಗಳ ಚಿಕಿತ್ಸೆ, ಜಾನುವಾರುಗಳ ಅಭಿವೃದ್ಧಿಗಾಗಿ ಕೃತಕ ಗರ್ಭಧಾರಣೆ, ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ರೋಗ ನಿರೋಧಕ ಲಸಿಕಾ ಪರಿಶಿಷ್ಟ ವರ್ಗದ ಜನರಿಗಾಗಿ ಸಾಮಾಜಿಕ ಆರ್ಥಿಕ ಕಾರ್ಯಕ್ರಮಗಳಾದ ವಿಶೇಷ ಘಟಕ ಯೋಜನೆ, ಗಿರಿಜನ ಉಪಯೋಜನೆ, ಮೇವು ಅಭಿವೃದ್ಧಿ ಕಾರ್ಯಕ್ರಮ, ಗಿರಿರಾಜ ಕೋಳಿಗಳ ಸಾಕಾಣಿಕೆ ಮಾಡಿ ರೈತರಿಗೆ ಮಾರಾಟ ಹಾಗೂ ರೈತರಿಗೆ ಪಶುಸಂಗೋಪನಾ ಇಲಾಖೆಯಿಂದ ದೊರೆಯಬಹುದಾದ ಸೌಲಭ್ಯಗಳು ಹಾಗೂ ಇತರೆ ಮಾಹಿತಿಗಳನ್ನು ನೀಡುವ ವಿಸ್ತರಣಾ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲಾಗುತ್ತಿದೆ.

ಇ) ಉಡುಪಿ ಜಿಲ್ಲೆ ಆಸ್ಪತ್ರೆಯಲ್ಲಿನ ಸಂಚಾರಿ ಪಶುಚಿಕಿತ್ಸಾಲಯದ ವಾಹನವನ್ನು, ಚಾಲಕರೊಂದಿಗೆ ಉಪ ನಿರ್ದೇಶಕರ ಕಛೇರಿಗೆ ವರ್ಗಾಯಿಸಿದ್ದು, ಸಂಚಾರಿ ಪಶುಚಿಕಿತ್ಸಾ ಘಟಕದ ಕೊರತೆ ಇದೆ. ಮಂಜೂರಾಗಿರುವ ಪಶುವೈದ್ಯಾಧಿಕಾರಿಗಳ ಮತ್ತು ಡಿ–ದರ್ಜೆ ನೌಕರರ ಹುದ್ದೆಗಳು ಖಾಲಿ ಇದೆ, ಇದಲ್ಲದೆ ಆಸ್ಪತ್ರೆಯಲ್ಲಿ ಪಶುವೈದ್ಯಾಧಿಕಾರಿಗಳ ಒಂದು ಹುದ್ದೆ, ಪಶುಪರೀಕ್ಷಕರ ಒಂದು ಹುದ್ದೆ, ಪಶುವೈದ್ಯಸಹಾಯಕರ ಒಂದು ಹುದ್ದೆ, ವಾಹನ ಚಾಲಕರ ಒಂದು ಹುದ್ದೆ ಹಾಗೂ ಡಿ–ದರ್ಜೆ ನೌಕರರ ಎರಡು ಹುದ್ದೆಗಳು ಸೇರಿದಂತೆ ಒಟ್ಟು 6 ಹುದ್ದೆಗಳು ಖಾಲಿ ಇರುತ್ತವೆ.

ಉಡುಪಿ ಜಿಲ್ಲೆಯಲ್ಲಿ ಪಶುವೈದ್ಯಾಧಿಕಾರಿಗಳ ಕೊರತೆಯ ತಾಲ್ಲೂಕುವಾರು ವಿವರ ಕೆಳಕಂಡಂತಿದೆ.